# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 160 | Pages. 2 | Date: 02-06-2026, TUESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 160 - ಪುಟಗಳು : 2 | 02-06-2026 | ಮಂಗಳವಾರ | Ph: 8762954248 | ದರ : ₹1


# ಅನ್ನದಾಸೋಹ ಪುಣ್ಯ-ಪವಿತ್ರ ಕೆಲಸ

## ಪತ್ರಕರ್ತರ ಸಂಘದ ನಡೆ ರಾಜ್ಯಕ್ಕೆ ಮಾದರಿ: ಶ್ರೀ ಶಂಭುನಾಥ ಸ್ವಾಮೀಜಿ ಮೆಚ್ಚುಗೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಠ ಮಾನ್ಯಗಳ ರೀತಿಯಲ್ಲಿ ಹಾಸನ ಜಿಲ್ಲಾ ಪತ್ರಕರ್ತರ ಸಂಘದಲ್ಲೂ ನಿತ್ಯ ಅನ್ನದಾಸೋಹ ಕಾರ್ಯ ನಡೆಯುತ್ತಿರುವುದು ಅತ್ಯಂತ ಪವಿತ್ರ ಹಾಗೂ

ಇಡೀ ರಾಜ್ಯಕ್ಕೆ ಮಾದರಿ ಎಂದು ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಮೆಚ್ಚುಗೆ ವ್ಯಕ್ತಪಡಿಸಿದರು.



ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿರುವ ಡಿವಿಜಿ ಸಭಾಂಗಣದಲ್ಲಿ ಸೋಮವಾರ ಆಯೋಜಿಸಲಾಗಿದ್ದ ಅನ್ನದಾಸೋಹ ಶತದಿನೋತ್ಸವ, ಪ್ರತಿಭಾ ಪುರಸ್ಕಾರ ಹಾಗೂ ಕೆನರಾ ಬ್ಯಾಂಕ್ ಗಿಗ್ ಸ್ಟಾರ್ ಯೋಜನೆಗೆ ಚಾಲನೆ ನೀಡಿ ಆಶೀರ್ವಚನ ನೀಡಿದರು.

ಕಾರ್ಯ ಎಂದು ವಾದ ಮಾದರಿ ಕಾರ್ಯಕ್ರಮವಾಗಿದ್ದು, ಜೊತೆಗೆ ಸಂಘದ ಪತ್ರಕರ್ತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಏರ್ಪಡಿಸಿರುವುದು ಉತ್ತಮವಾಗಿದೆ ಎಂದು ಶ್ರೀ ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಮೆಚ್ಚುಗೆವ್ಯಕ್ತಪಡಿಸಿದರು.

ಹಸಿವು ಎಂಬುದು ಅತ್ಯಂತ ಕಷ್ಟ ಮತ್ತು ನೋವಿನ ಪರಿಸ್ಥಿತಿಗೆ ದೂಡುತ್ತದೆ. ಎಷ್ಟೋ ಮಂದಿಗೆ ಹಸಿದವರಿಗೆ ಅಂಜಿಕೆ ಇರಲಿದೆ, ಇಂಥ ಸಂದರ್ಭದಲ್ಲಿ ಹಸಿದವರಿಗೆ ಆಹಾರ ಒದಗಿಸುವುದು ಅತ್ಯಂತ ಶ್ರೇಷ್ಠ ಹಾಗೂ ಪುಣ್ಯದ ಕಾರ್ಯವಾಗಿದೆ ಎಂದರು. ಪತ್ರಕರ್ತರ ಸಂಘವು ಕೇವಲ ಪತ್ರಕರ್ತರ ಸಮಸ್ಯೆಗಳಿಗೆ ಸ್ಪಂದಿಸುವುದರ ಜೊತೆಗೆ ಸಮಾಜಮುಖಿ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ. ಯುವಕರಿಗೆ ಮಧ್ಯಾಹ್ನದ ಊಟ ವ್ಯವಸ್ಥೆ ಕಲ್ಪಿಸಿರುವುದು ಶ್ಲಾಘನೀಯ.

ಅನ್ನದಾಸೋಹದ ಬಗ್ಗೆ ಮಾತನಾಡುವಾಗ ಸಿದ್ಧಗಂಗಾ ಶ್ರೀಗಳು, ಡಾ. ಬಾಲಗಂಗಾಧರನಾಥ ಸ್ವಾಮೀಜಿ ಸೇರಿದಂತೆ ಅನೇಕ ಮಹನೀಯರ ಸೇವೆ ಸ್ಮರಣೀಯ

ಪತ್ರಕರ್ತರ ಸಂಘದ ಅನ್ನದಾಸೋಹ ಕೇವಲ ನೂರು ದಿನಗಳಿಗೆ ಸೀಮಿತವಾಗದೆ ತಲಾತಲಾಂತರದವರೆಗೂ ಮುಂದುವರಿಯಲಿ, ಯುವಕರು ಮುಂದುವರಿಸಿಕೊಂಡು ಹೋಗಬೇಕು. ಹೊಸ ಕೆಲಸ ಆರಂಭಿಸಿದಾಗ ಟೀಕೆ-ಟಿಪ್ಪಣಿಗಳು ಸಾಮಾನ್ಯ.

> ಪಿಯುಸಿ ವಿಭಾಗದಲ್ಲಿ ತನಿಷ್ಕ ಎನ್.ಕುಚ್ಚಳ್ಳಿ, ಸಮೃದ್ಧಿ ವಿ, ಸಮನ್ವಿತಾ, ಭುವನ್ ಕೆ.ಎನ್, ಆಕಾಂಕ್ಷ ಎಸ್.ವಿ. ಮತ್ತು ಚಿನ್ಮಯಿ ಎಂ.ಎಸ್ ಹಾಗೂ ಎಸ್‌ಎಲ್‌ಎಲ್ಸಿ ವಿಭಾಗದಲ್ಲಿ ನವಮಿ ಎಸ್.ಎಸ್., ಎನ್.ಎನ್.ವರ್ಷಿಣಿ ರಾಜ್ ಮತ್ತು ಚೈತನ್ಯ ಯು ಅವರಿಗೆ ಸ್ವಾಮೀಜಿ ಹಾಗೂ ಇತರರು ಪ್ರತಿಭಾ ಪುರಸ್ಕಾರ ನೀಡಿ ಅಭಿನಂದಿಸಿದರು.

ಅದಕ್ಕೆ ಕಿವಿಗೊಡದೆ ಸಮಾಜದ ಹಿತದತ್ತ ಸಾಗಬೇಕು. ಒಳ್ಳೆಯ ಕೆಲಸ ಮಾಡಲಾಗದಿದ್ದರೂ ಪರವಾಗಿಲ್ಲ, ಆದರೆ ಇತರರಿಗೆ ತೊಂದರೆ ಕೊಡಬಾರದು ಎಂಬ ಸಂದೇಶವನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಅನ್ನದಾನ ಅತ್ಯಂತ ಪವಿತ್ರ ದಾನ. ಜಲದಾನ, ಅನ್ನದಾನ ಹಾಗೂ ಒಳ್ಳೆಯ ಮಾತುಗಳು ಸಮಾಜದ ನಿರ್ಮಾಣಕ್ಕೆ ಅಗತ್ಯ. ಪತ್ರಕರ್ತರ ಕುಟುಂಬಗಳು ಅಕ್ಷರ ದಾಸೋಹ ಜೊತೆಗೆ ಅನ್ನದಾಸೋಹವನ್ನೂ ನಡೆಸುತ್ತಿರುವುದು ಸಂತೋಷದ ವಿಷಯ. ಹಿಂದಿನಿಂದಲೂ ಜಿಲ್ಲೆಯ ಪತ್ರಕರ್ತರು ಹಾಗೂ ಶ್ರೀಮಠದೊಂದಿನ ಸಂಬಂಧ ಅವಿನಾಭಾವದಿಂದ ಹಾಲು-ಸಿಹಿಯಂತೆ ಕೂಡಿದೆ. ಮುಂದೆಯೂ ಶ್ರೀಮಠ ನಿಮ್ಮ ಜೊತೆಗಿರಲಿದೆ ಎಂದರು.



ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್. ಕೆಂಚೇಗೌಡ ಮಾತನಾಡಿ, ಸಂಘವು ಅನ್ನದಾಸೋಹ ಸೇರಿದಂತೆ ಹಲವು ಜನಪರ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ವಿಸ್ತರಿಸುವ ಉದ್ದೇಶ ಹೊಂದಿದೆ. ಆದಿಚುಂಚನಗಿರಿ ಮಠ, ಶಿಕ್ಷಣ, ಆರೋಗ್ಯ, ಕ್ರೀಡೆ ಹಾಗೂ ದಾಸೋಹ ಕ್ಷೇತ್ರಗಳಲ್ಲಿ ರಾಜ್ಯಕ್ಕೆ ಮಾದರಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಂಘದ ಪ್ರಧಾನ ಕಾರ್ಯದರ್ಶಿ ಕೆ.ಜಿ. ಸುರೇಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರತಿನಿತ್ಯ ನಡೆಯುವ ಅನ್ನದಾಸೋಹ ಯೋಜನೆಯಡಿ 30ಕ್ಕೂ ಹೆಚ್ಚು ಯುವಕರು ಸೌಲಭ್ಯ ಪಡೆಯುತ್ತಿದ್ದಾರೆ. ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡುವ ಮೂಲಕ ಅವರಿಗೆ ಉತ್ತೇಜನ ನೀಡಲಾಗುತ್ತಿದೆ. ಕೆನರಾ ಬ್ಯಾಂಕ್‌ನ ಗಿಗ್ ಸ್ಟಾರ್ ಯೋಜನೆ ಕುರಿತು ಮಾಹಿತಿ ನೀಡಿದರು. ಲೀಡ್ ಬ್ಯಾಂಕ್ ವ್ಯವಸ್ಥಾಪಕಿ ಲತಾ ಸರಸ್ವತಿ ಮಾತನಾಡಿ, 18 ವರ್ಷ ಮೇಲ್ಪಟ್ಟ ಅಸಂಘಟಿತ ಕಾರ್ಮಿಕರು ಗಿಗ್ ಸ್ಟಾರ್ ಖಾತೆ ತೆರೆಯಬಹುದಾಗಿದೆ. ಆದಾಯ ತೆರಿಗೆ ದಾಖಲೆ ಅಥವಾ ವೇತನ ಪ್ರಮಾಣ ಪತ್ರವಿಲ್ಲದೆ ವಾಹನ ಹಾಗೂ ಗೃಹಸಾಲ ಸೌಲಭ್ಯ, ಅಪಘಾತ ವಿಮೆ ಸೇರಿದಂತೆ ಹಲವು ಪ್ರಯೋಜನಗಳಿವೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲೆಯ ಪತ್ರಕರ್ತರ ಪ್ರತಿಭಾವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಅಭಿನಂದಿಸಲಾಯಿತು. ಈ ವೇಳೆ ಭಾರತ್ ಗ್ಯಾಸ್ ಏಜೆನ್ಸಿ ಮಾಲೀಕ ಕೃಷ್ಣ ಅವರನ್ನೂ ಅಭಿನಂದಿಸಲಾಯಿತು. ಸಂಘದ ಉಪಾಧ್ಯಕ್ಷರಾದ ಎನ್.ನಂಜುಂಡೇಗೌಡ, ಜಿ.ಪ್ರಕಾಶ್, ಕಾರ್ಯದರ್ಶಿಗಳಾದ ಬಿ.ಆರ್.ಬೊಮ್ಮೇಗೌಡ, ಕೆ.ಎಂ. ಹರೀಶ್, ಖುಷ್ವಂತ್, ಖಜಾಂಚಿ ಪ್ರಕಾಶ್ ಬೆಳವಾಡಿ, ಬಿಸಿಯೂಟ ಮೇಲ್ವಿಚಾರಕ ಪ್ರತಾಪ್ ಜಿ.ಹಿರೀಸಾವೆ ಇದ್ದರು.

# ಡಿ.ವೈ.ಎಸ್.ಪಿ. ವಿರುದ್ಧ ಬಜರಂಗದಳ - ವಿಶ್ವ ಹಿಂದೂ ಪರಿಷತ್ತಿನಿಂದ ಪ್ರತಿಭಟನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ ಪಟ್ಟಣದಲ್ಲಿ ಡಿವೈಎಸ್ಪಿ ಮಾಲತೀಶ್ ವಿರುದ್ಧ ಬಜರಂಗದಳ ಹಾಗೂ ವಿಶ್ವ ಹಿಂದೂ ಪರಿಷತ್ (ವಿಹೆಚ್‌ಪಿ) ಕಾರ್ಯಕರ್ತರು ಪೊಲೀಸ್ ಠಾಣೆ ಮುಂಭಾಗ ದಿಡೀರ್ ಪ್ರತಿಭಟನೆ ನಡೆಸಿದ ಘಟನೆ ಸೋಮವಾರ ನಡೆದಿದೆ.

ಬಜರಂಗದಳ ಮತ್ತು ವಿಹೆಚ್‌ಪಿ ಕಾರ್ಯಕರ್ತರಿಗೆ ಅವಮಾನ, ನಿಂದನೆ ಹಾಗೂ ಬೆದರಿಕೆ ಹಾಕಿರುವ ಆರೋಪದ ಹಿನ್ನೆಲೆಯಲ್ಲಿ ಪ್ರತಿಭಟನೆ ನಡೆಸಿದ ಕಾರ್ಯಕರ್ತರು, ಡಿವೈಎಸ್ಪಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಪ್ರತಿಭಟನಾಕಾರರ ಆರೋಪದ ಪ್ರಕಾರ, ಹಾಸನ ಜಿಲ್ಲಾ ಬಜರಂಗದಳದ ಜಿಲ್ಲಾ ಸಹ ಸಂಯೋಜಕ ವಿಷ್ಣು ಹಾಗೂ ತಾಲೂಕು ಸಂಯೋಜಕ ಶ್ರೈಜನ್ ಅವರಿಗೆ ಡಿವೈಎಸ್ಪಿ ಮಾಲತೀಶ್ ಬೆದರಿಕೆ ಹಾಕಿದ್ದು, "ರೌಡಿ ಶೀಟರ್ ತೆರೆಯುತ್ತೇನೆ" ಎಂದು ಎಚ್ಚರಿಕೆ ನೀಡಿದ್ದಾರೆ ಎನ್ನಲಾಗಿದೆ.

ಇದೇ ವಿಚಾರವಾಗಿ ನ್ಯಾಯ ಕೇಳಲು ಸೋಮವಾರ ಮಧ್ಯಾಹ್ನ ಡಿವೈಎಸ್ಪಿ ಕಚೇರಿಗೆ ತೆರಳಿದ್ದ ಕಾರ್ಯಕರ್ತರಿಗೆ ಉಡಾಫೆಯ ಉತ್ತರ ನೀಡಲಾಗಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದ್ದಾರೆ. ಡಿವೈಎಸ್ಪಿಯ ವರ್ತನೆಯಿಂದ ಅಸಮಾಧಾನಗೊಂಡ ಕಾರ್ಯಕರ್ತರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಸ್ಥಳಕ್ಕೆ ಆಗಮಿಸಿ ಸ್ಪಷ್ಟನೆ ನೀಡಬೇಕು ಎಂದು ಒತ್ತಾಯಿಸಿದರು.

"ಎಸ್‌ಪಿ ಸ್ಥಳಕ್ಕೆ ಬರುವವರೆಗೂ ಪ್ರತಿಭಟನೆ ಹಿಂಪಡೆಯುವುದಿಲ್ಲ" ಎಂದು ಬಜರಂಗದಳ ಹಾಗೂ ವಿಶ್ವ ಹಿಂದೂ ಪರಿಷತ್ ಕಾರ್ಯಕರ್ತರು ಘೋಷಣೆ ಕೂಗಿ ಠಾಣೆ ಎದುರು ಕುಳಿತು ಪ್ರತಿಭಟನೆ ಮುಂದುವರಿಸಿದರು.

ಎರಡು ದಿನಗಳ ಹಿಂದೆ ಪಟ್ಟಣದ ಕುಶಾಲನಗರ ಪ್ರದೇಶದಲ್ಲಿ ಗೋವಿನ ತಲೆಯನ್ನು ರಸ್ತೆಯ ಮಧ್ಯೆ ಇಟ್ಟಿದ್ದ ಆರೋಪಿಗಳ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಮಂಗಳವಾರ "ಕುಶಾಲನಗರ ಚಲೋ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಮಾಹಿತಿ ಹಂಚಿಕೊಂಡಿದ್ದ ಬಜರಂಗದಳ ಮುಖಂಡ ವಿಷ್ಣು ಅವರನ್ನು ಡಿವೈಎಸ್ಪಿ ಠಾಣೆಗೆ ಕರೆಸಿಕೊಂಡಿದ್ದರು. ಈ ವೇಳೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಬೆದರಿಕೆ ಹಾಕಿ ಕಳುಹಿಸಿದ್ದಾರೆ ಎಂದು ವಿಷ್ಣು ಮತ್ತು ಸಂಘಟನೆಯ ಕಾರ್ಯಕರ್ತರು ಆರೋಪಿಸಿದ್ದಾರೆ.

# ವಿಶ್ವ ತಂಬಾಕು ವಿರೋಧಿ ದಿನ ಆಚರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಸಾರ್ವಜನಿಕರ ಆರೋಗ್ಯ ರಕ್ಷಣೆಗೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ವಿಶೇಷ ಕಾಳಜಿ ವಹಿಸುತ್ತಿದೆ ಎಂದು ಹಿರಿಯ ಪತ್ರಕರ್ತ ಎ.ಎಂ.ಜಯರಾಮ್ ಹೇಳಿದರು.



ತಾಲ್ಲೂಕಿನ ಗೌಡಗೆರೆ ಗ್ರಾಮದ ನಳಂದ ವಿದ್ಯಾ ಶಾಲೆಯಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾ ಘಟಕ ಆಯೋಜಿಸಿದ್ದ ವಿಶ್ವ ತಂಬಾಕು ವಿರೋಧಿ ದಿನ ಕಾರ್ಯಕ್ರಮದಲ್ಲಿ ಮಾತನಾಡಿದ, ಧೂಮಪಾನ ಸೇರಿದಂತೆ ಹಲವು ದುಶ್ಚಟಗಳಿಗೆ ಯುವಕರು ಬಲಿಯಾಗುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ಆರೋಗ್ಯ ನೆಮ್ಮದಿ ಹಾಗೂ ಆರ್ಥಿಕ ಸಂಕಷ್ಟಕ್ಕೂ ಒಳಗಾಗಿ ಅನಾರೋಗ್ಯ ಪೀಡಿತರಾಗಿ ಭೀಕರ ಕಾಯಿಲೆಗಳನ್ನು ಎದುರಿಸುವ ಸ್ಥಿತಿ ಕುಟುಂಬಕ್ಕೆ ಬರುತ್ತಿದೆ. ತಾಲೂಕಿನಲ್ಲಿ ಪ್ರತಿ ವಾರಕ್ಕೆ 2 ಕೋಟಿಗೂ ಹೆಚ್ಚು ಬೀಡಿ-ಸಿಗರೇಟು ಮಾರಾಟವಾಗುತ್ತಿರುವುದು ಆತಂಕಕಾರಿ, ಇದಕ್ಕೆ ಕಡಿವಾಣ ಹಾಕದಿದ್ದರೆ ಕ್ಯಾನ್ಸರ್, ಶ್ವಾಸಕೋಶ ಕಾಯಿಲೆ ಸೇರಿದಂತೆ ಮನುಷ್ಯ ಕಾಯಿಲೆಗಳ ಗೂಡಾಗುತ್ತಾನೆ ಎಂದು ತಿಳಿಸಿದರು.

ಯುವ ಜನಾಂಗ ದಿಕ್ಕು ತಪ್ಪುತ್ತದೆ, ಕುಟುಂಬದ ನೆಮ್ಮದಿ ಹಾಳಾಗುತ್ತದೆ, ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವಲ್ಲಿ ಮಹಿಳೆಯರು ಹಾಗೂ ಕುಟುಂಬದ ಮುಖ್ಯಸ್ಥರು ಯುವಕರಿಗೆ ಸೂಕ್ತ ಮಾರ್ಗದರ್ಶನ ನೀಡಬೇಕಾಗಿದೆ ಎಂದರು.

ಯೋಜನಾಧಿಕಾರಿ ಪುರಂದರ ಪ್ರಾಸ್ತಾವಿಕ ನುಡಿಯಾಡಿ, ಆರೋಗ್ಯವಂತ ಸ್ವಾಸ್ಥ ಸಮಾಜ ನಿರ್ಮಾಣದ ಗುರಿ ಧರ್ಮಸ್ಥಳದ ಡಾ. ವೀರೇಂದ್ರ ಹೆಗ್ಗಡೆಯವರದ್ದಾಗಿದೆ, ಜನಜಾಗೃತಿ ವೇದಿಕೆಯ ಮೂಲಕ, ಆರೋಗ್ಯದ ಬಗ್ಗೆ ಅರಿವು, ಮಧ್ಯವರ್ಜನ ಶಿಬಿರ, ಆರೋಗ್ಯ ಸಂಕಲ್ಪ ಯೋಜನೆ ಅಡಿ ಹಲವಾರು ಯೋಜನೆಗಳನ್ನು ಗ್ರಾಮೀಣ ಜನರಿಗೆ ತಿಳಿಸುವ ಕಾರ್ಯ ಮಾಡುತ್ತಿದೆ, ದುಶ್ಚಟಕ್ಕೆ ಬಲಿಯಾಗಿ ಆರೋಗ್ಯ ನೆಮ್ಮದಿ ಹಾಳು ಮಾಡಿಕೊಳ್ಳಬಾರದು ಸಹವಾಸ ದೋಷದಿಂದ ದುಷ್ಚಕ್ಕೆ ಬಲಿಯಾಗಬೇಡಿ ಎಂದರು.

ಜನಜಾಗೃತಿ ವೇದಿಕೆಯ ಸದಸ್ಯ, ಹಾಗೂ ಪ್ರಗತಿಪರ ಕೃಷಿಕ ಬೆಕ್ಕ ರಾಘವೇಂದ್ರ, ಮಾತನಾಡಿ, ಸಾವಯವ ಕೃಷಿ, ಅಗತ್ಯವಿದೆ, ಭೂಮಿಗೆ ರಾಸಾಯನಿಕ ಗೊಬ್ಬರ ಬಳಕೆ ಮಾಡುವುದರಿಂದ ಆರೋಗ್ಯ ಹಾಳಾಗುತ್ತಿದೆ, ಅತಿಯಾದ ರಾಸಾಯನಿಕ ಗೊಬ್ಬರಗಳ ಬಳಕೆ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದೆ ಎಂಬ ಆತಂಕ ವ್ಯಕ್ತಪಡಿಸಿದರು.

ಗೌಡಗೆರೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಯೋಗೇಶ್, ನಳಂದ ವಿದ್ಯಾ ಶಾಲೆಯ ಮುಖ್ಯಸ್ಥರಾದ ವಸಂತ್, ಮುಖ್ಯೋಪಾಧ್ಯಾಯ ಜಯರಾಮ್, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಸುರೇಶ್ ಗೌಡ, ಸರಸ್ವತಿ, ಒಕ್ಕೂಟದ ಅಧ್ಯಕ್ಷರಾದ ರಾಧಮ್ಮ, ಸೇವಾ ಪ್ರತಿನಿಧಿ ಅನುಷಾ, ಲತಾ, ಪ್ರಮುಖರಾದ ಸಂತೋಷ್ ಹಾಗೂ ಮುಂತಾದವರಿದ್ದರು. ಮಹಿಳಾ ಸ್ವಸಹಾಯ ಸಂಘದ ಸದಸ್ಯರು, ಗ್ರಾಮದ ಪ್ರಮುಖರು ಕಾರ್ಯಕ್ರಮದಲ್ಲಿದ್ದರು.

# 65 ಲಕ್ಷ ರೂ. ವೆಚ್ಚದ ಕಾಮಗಾರಿಗೆ ಚಾಲನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಗ್ರಾಮೀಣ ಪ್ರದೇಶಗಳಲ್ಲಿ ಉತ್ತಮ ಆರೋಗ್ಯ ಸೇವೆ ಲಭ್ಯವಾದರೆ ಜನರು ನಗರ ಪ್ರದೇಶಗಳಿಗೆ ಅಲೆಯುವುದು ತಪ್ಪಲಿದೆ ಎಂದು ಸಿ.ಎನ್.ಬಾಲಕೃಷ್ಣ ಹೇಳಿದರು.



ತಾಲ್ಲೂಕಿನ ಎ. ಚೋಳೇನಹಳ್ಳಿ ಗ್ರಾಮದಲ್ಲಿ 65 ಲಕ್ಷ ರೂ. ವೆಚ್ಚದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ಆಯುಷ್ಮಾನ್ ಆರೋಗ್ಯ ಮಂದಿರ ನಿರ್ಮಾಣ ಕಾಮಗಾರಿಗೆ ಸೋಮವಾರ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಆದ್ದರಿಂದ ಆಯುಷ್ ಆರೋಗ್ಯ ಮಂದಿರ ಸ್ಥಾಪನೆಗೆ ಒತ್ತು ನೀಡಲಾಗುತ್ತಿದೆ ಎಂದರು.

ಗ್ರಾಮಸ್ಥರಿಗೆ ಸ್ಥಳೀಯವಾಗಿಯೇ ಉತ್ತಮ ಗುಣಮಟ್ಟದ ವೈದ್ಯಕೀಯ ಸೇವೆ ಸಿಗಬೇಕು ಎಂಬ ಉದ್ದೇಶದಿಂದ ಆರೋಗ್ಯ ಮಂದಿರ ನಿರ್ಮಿಸಲಾಗುತ್ತಿದೆ.

ದಡದಳ್ಳಿ, ಅಡಗೂರು, ಸಾಸಲಪುರ, ಮಳ್ಳೆನಹಳ್ಳಿ, ಸಣ್ಣಪುಟ್ಟ ಅನಾರೋಗ್ಯ ಸಮಸ್ಯೆಗಳಿಗೂ ಇಲ್ಲಿನ ಜನರು ಪಟ್ಟಣಗಳಿಗೆ ಹೋಗುವುದನ್ನು ತಪ್ಪಿಸಲು ಇಲ್ಲಿ ಆರೋಗ್ಯ ಕೇಂದ್ರ ನಿರ್ಮಾಣಕ್ಕೆ ಆಯ್ಕೆ ಮಾಡಿದ್ದು, ಸುಸಜ್ಜಿತ ಕಟ್ಟಡ ಶೀಘ್ರ ನಿರ್ಮಾಣವಾಗಿ ಶೀಘ್ರ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದು ತಿಳಿಸಿದರು.

ಗ್ರಾಮದ ಮಧ್ಯಭಾಗದಲ್ಲಿ ನಾಲ್ಕು ಪಥದ ರಸ್ತೆ ಹಾದು ಹೋಗುತ್ತಿರುವುದರಿಂದ ಆರೋಗ್ಯ ಮಂದಿರವನ್ನು ಗ್ರಾಮದ ಒಳಭಾಗದಲ್ಲಿ ನಿರ್ಮಿಸಲಾಗುತ್ತಿದ್ದು ಕಾಮಗಾರಿ ನಡೆಯುವ ವೇಳೆ ಸಲಹೆ ಸಹಕಾರಗಳು ನೀಡಿ ನಿರ್ಮಾಣಕ್ಕೆ ಸಹಕಾರ ನೀಡಬೇಕು. ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರಕ್ಕೆ 37 ಆಯುಷ ಕೇಂದ್ರಗಳು ಮಂಜೂರಾಗಿದ್ದು ಆರೋಗ್ಯ ಕ್ಷೇತ್ರದ ಸೌಲಭ್ಯಗಳ ಉನ್ನತೀಕರಣಕ್ಕೆ ಒತ್ತು ನೀಡಿದ್ದು, ಗ್ರಾಮಸ್ಥರಿಗೆ ಉತ್ತಮ ಚಿಕಿತ್ಸೆ ದೊರೆಯಬೇಕು ಎನ್ನುವುದು ನಮ್ಮ ಕಾಳಜಿ ಎಂದರು. ಗ್ರಾಮದಲ್ಲಿ ನಿರ್ಮಾಣವಾಗುತ್ತಿರುವ ಸಮುದಾಯ ಭವನದ ಎರಡನೇ ಹಂತದ ಕಾಮಗಾರಿ ಪ್ರಗತಿಯಲ್ಲಿದ್ದು, 10 ಲಕ್ಷ ರೂ. ಅನುದಾನ ಒದಗಿಸಿ ಪೂರ್ಣಗೊಳಿಸಲಾಗುವುದು ಸಮುದಾಯ ಭವನ ಪೂರ್ಣಗೊಂಡರೆ ಗ್ರಾಮಸ್ಥರ ಕಾರ್ಯ ಚಟುವಟಿಕೆಗಳಿಗೆ ಅನುಕೂಲವಾಗುತ್ತದೆ. ಶೀಘ್ರದಲ್ಲಿಯೇ ಕಾರ್ಯರೂಪ ಗೊಳಿಸಲಾಗುವುದು ಎಂದು ಭರವಸೆ ನೀಡಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಪಿ.ತೇಜಸ್ವಿನಿ, ಆರೋಗ್ಯ ಇಲಾಖೆಯ ಅಭಿಯಂತರ ಪುಟ್ಟಸ್ವಾಮಿ, ಸಿಬ್ಬಂದಿ ವರ್ಗ ಸೇರಿದಂತೆ ಗ್ರಾಮದ ಮುಖಂಡರು ಭಾಗವಹಿಸಿದ್ದರು.

# ಪ್ರಥಮ ಪಿಯು ವಿದ್ಯಾರ್ಥಿಗಳಿಗೆ ಅಭಿ ವಿನ್ಯಾಸ ಕಾರ್ಯಕ್ರಮ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಗುಡ್ ಸಿಟಿಜನ್ ಪದವಿ ಪೂರ್ವ ಕಾಲೇಜಿನಲ್ಲಿ 2026 -27ನೇ ಸಾಲಿನ ವಾಣಿಜ್ಯ ಹಾಗೂ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳಿಗೆ ಅಭಿ ವಿನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಡಾ. ಹೇಮಂತ್ ಕುಮಾರ್ ವಹಿಸಿದ್ದರು ಮುಖ್ಯ ಅತಿಥಿಗಳಾಗಿ ಕಾಂತರಾಜ್ ಎಂ ಎನ್ ಭಾಗವಹಿಸಿದ್ದರು ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಸತೀಶ್ ಕೃಷ್ಣರಾಜು ಸುನಿಲ್ ಸಂಜಯ್ ಕುಮಾರ್ ಭಾಗವಹಿಸಿದ್ದರು ಕಾರ್ಯಕ್ರಮವನ್ನು ಶ್ರೀನಿವಾಸ್ ನಿರೂಪಿಸಿದರು.

# ಮುನಿಯಪ್ಪ-ಮಹದೇವಪ್ಪಗೆ ಸಚಿವ ಸ್ಥಾನ ನೀಡಲು ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಿಯೋಜಿತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಿಎಂ ಆಗುತ್ತಿರುವುದಕ್ಕೆ ಕರ್ನಾಟಕ ಮಾದಾರ ಮಹಾಸಭಾ ಸ್ವಾಗತಿಸಿದ್ದು, ಪಕ್ಷದ ಹಿರಿಯ ನಾಯಕ ಕೆ.ಎಚ್. ಮುನಿಯಪ್ಪ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವ ಮೂಲಕ, ಪ್ರಬಲ ಖಾತೆಗಳನ್ನೂ ನೀಡಿ ಗೌರವ ಸಲ್ಲಿಸಬೇಕು ಎಂದು ಆಗ್ರಹಿಸಿ ನಗರದ ಜಿಪಂ ಎದುರು ಇರುವ ಅಂಬೇಡ್ಕರ್ ಪ್ರತಿಮೆ ಮುಂದೆ ಮಾದಾರ ಮಹಾಸಭಾ ಸದಸ್ಯರು ಪ್ರತಿಭಟನೆ ನಡೆಸಿದರು.




ಈ ವೇಳೆ ಮಾತನಾಡಿದ ಮಹಾಸಭಾ ಜಿಲ್ಲಾಧ್ಯಕ್ಷ ಟಿ.ಆರ್. ವಿಜಯ್ ಕುಮಾರ್, ಡಿ.ಕೆ. ಶಿವಕುಮಾರ್, ಎಐಸಿಸಿ ಅಧ್ಯಕ್ಷರು, ಕಾಂಗ್ರೆಸ್ ರಾಷ್ಟ್ರೀಯ ನಾಯಕರು ಹಾಗೂ ರಾಜ್ಯ ಕಾಂಗ್ರೆಸ್ ನಾಯಕರಿಗೆ ಬಹಿರಂಗ ಪತ್ರ ಬರೆದಿದ್ದು, ಮುನಿಯಪ್ಪ ಅವರು ಹಲವು ದಶಕಗಳಿಂದ ಕಾಂಗ್ರೆಸ್ ಪಕ್ಷದ ಕಟ್ಟಾಳುವಾಗಿ ಸೇವೆ ಸಲ್ಲಿಸಿದ್ದು, ಪಕ್ಷದ ಏಳಿಗೆಗಾಗಿ ಮಹತ್ವದ ಕೊಡುಗೆ ನೀಡಿದ್ದಾರೆ.

ಪರಿಶಿಷ್ಟ ಜಾತಿಯ ಎಡಗೈ ಸಮುದಾಯದಲ್ಲಿ ಅಪಾರ ಪ್ರಭಾವ ಹೊಂದಿರುವ ಮುನಿಯಪ್ಪ ಅವರಿಗೆ ಡಿಸಿಎಂ ಸ್ಥಾನ ನೀಡುವುದರಿಂದ ಸಮುದಾಯಕ್ಕೆ ನ್ಯಾಯ ದೊರೆಯುವುದರ ಜೊತೆಗೆ ಕಾಂಗ್ರೆಸ್ ಪಕ್ಷದ ಮೇಲಿನ ವಿಶ್ವಾಸವೂ ಮತ್ತಷ್ಟು ಬಲಗೊಳ್ಳಲಿದೆ ಎಂದರು.

ರಾಜ್ಯದಲ್ಲಿ ಸುಮಾರು 50 ಲಕ್ಷಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ಸಮುದಾಯದ ಆಶಯವನ್ನು ಕಾಂಗ್ರೆಸ್ ಪರಿಗಣಿಸಬೇಕು ಎಂದು ಮನವಿ ಮಾಡಿದರು. ಅವರ ಹಿರಿತನ, ಅನುಭವ ಹಾಗೂ ರಾಜಕೀಯ ಸೇವೆ ಪರಿಗಣಿಸಿ ಡಿಸಿಎಂ ಸ್ಥಾನ ನೀಡಬೇಕೆಂಬುದು ಒತ್ತಾಯಿಸಿದರು.

ಮುನಿಯಪ್ಪ ಅವರಿಗೆ ಡಿಸಿಎಂ ಸ್ಥಾನ ಜತೆಗೆ ಕಂದಾಯ, ಗೃಹ, ಲೋಕೋಪಯೋಗಿ, ಸಹಕಾರ ಅಥವಾ ಇಂಧನ ಇಲಾಖೆಗಳಂತಹ ಪ್ರಮುಖ ಖಾತೆ ನೀಡಬೇಕು. ಇದಕ್ಕಾಗಿ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ಕೆ.ಸಿ. ವೇಣುಗೋಪಾಲ್ ಹಾಗೂ ರಾಜ್ಯ ಉಸ್ತುವಾರಿಗಳು ಗಂಭೀರವಾಗಿ ಪರಿಗಣಿಸಬೇಕೆಂದರು. ಮಹಾಸಭಾದ ಸತೀಶ್ ಕಡಗ, ತಿರುಪತಿಹಳ್ಳಿ ಮುನಿಸ್ವಾಮಿ, ಪೊಲೀಸ್ ಶಿವಣ್ಣ, ನಾಗರಾಜು, ಭೈರೇಶ್ ಇದ್ದರು.

# ಕೊಡುಗೈ ದಾನಿ ಗ್ರಾನೈಟ್ ರಾಜಶೇಖರ್

## ಸೇವೆ ಮೂಲಕ ಜನಮನ ಗೆದ್ದ ಸಮಾಜಮುಖಿ ವ್ಯಕ್ತಿತ್ವ: ಹಲವರ ಬಣ್ಣನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಸಮಾಜ ಸೇವಕ ಗ್ರಾನೈಟ್ ರಾಜಶೇಖರ್ ಅವರ 63ನೇ ಜನ್ಮದಿನದ ಅಂಗವಾಗಿ ಅಭಿಮಾನಿಗಳು ಪಟ್ಟಣದ ಶ್ರೀ ಶಿವಕುಮಾರ ಸ್ವಾಮೀಜಿ ಕಲ್ಯಾಣ ಮಂಟಪದಲ್ಲಿ ರಕ್ತದಾನ ಶಿಬಿರ ಹಾಗೂ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಿದರು.

ತೆಂಕಲಗೋಡು ಬೃಹನ್ಮಠದ ಶ್ರೀ ಚನ್ನಸಿದ್ದೇಶ್ವರ ಸ್ವಾಮೀಜಿ ಮಾತನಾಡಿ, ತಾಲೂಕಿನಲ್ಲಿ ದೇವಸ್ಥಾನ, ಮಠ ಮಾನ್ಯ ಹಾಗೂ ಸಾಮಾಜಿಕ ಕಾರ್ಯಗಳಿಗೆ, ವಿದ್ಯಾರ್ಥಿಗಳು, ಬಡವರಿಗೆ ಸದಾ ತಮ್ಮ ಕೈಲಾದ ಸಹಾಯ ನೀಡಿ ಮುಂಚೂಣಿಯಲ್ಲಿ ನಿಲ್ಲುವ ವ್ಯಕ್ತಿ ಎಂದರೆ ರಾಜಶೇಖರ್ ಎಂದು ಗುಣಗಾನ ಮಾಡಿದರು.

ಗ್ರಾನೈಟ್ ರಾಜಶೇಖರ್ ಮಾತನಾಡಿ, ನಾನು ನನ್ನ ಹುಟ್ಟು ಹಬ್ಬ ಆಚರಿಸಿಕೊಳ್ಳುವುದಿಲ್ಲ. ಆದರೆ ನಮ್ಮ ಅಭಿಮಾನಿಗಳು ಕಳೆದ ಕೆಲ ವರ್ಷಗಳಿಂದ ಹುಟ್ಟು ಹಬ್ಬ ಆಚರಿಸುವ ಸಲುವಾಗಿ ರಕ್ತದಾನ ಶಿಬಿರ, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುವುದು ಮತ್ತು ದಾಸೋಹದ ಮೂಲಕ ಆಚರಿಸಲು ಮುಂದಾಗಿದ್ದಾರೆ. ರಕ್ತವನ್ನು ಕೃತಕವಾಗಿ ತಯಾರಿಸಲು ಸಾಧ್ಯವಿಲ್ಲ. ಆದ್ದರಿಂದ ಒಬ್ಬರು ನೀಡುವ ರಕ್ತ, ಮೂವರ ಜೀವ ಉಳಿಸುವುದು ಸಾರ್ಥಕತೆಗೆ ಸಾಕ್ಷಿಯಾಗುತ್ತದೆ. ಜತೆಗೆ ವಿದ್ಯಾರ್ಥಿಗಳ ಮುಂದಿನ ಭವಿಷ್ಯ ರೂಪಿಸುವಲ್ಲಿ ಇದು ಸಹಕಾರಿ.

ಇಂತಹ ಕಾರ್ಯಕ್ರಮಕ್ಕೆ ಸ್ವಾಮೀಜಿಗಳನ್ನು ಕರೆಸಿ ನನ್ನ ಹುಟ್ಟು ಹಬ್ಬವನ್ನು ಸಮಾಜ ಮುಖಿ ಕೆಲಸಗಳ ಮೂಲಕ ಆಚರಿಸಿರುವುದು ಸಂತೋಷ ತಂದಿದೆ ಎಂದರು.

ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ಬಿ. ಶಿವರಾಜು ಮಾತನಾಡಿ, ರಕ್ತದಾನ ಮಹಾದಾನ. ಒಬ್ಬರ ರಕ್ತದಾನವು ಮೂರು ಜನರ ಜೀವ ಉಳಿಸಲು ಸಹಕಾರಿಯಾಗುತ್ತದೆ

ಜತೆಗೆ ರಕ್ತದಾನದ ಬಗ್ಗೆ ಜಾಗೃತಿ ಮೂಡಿಸುತ್ತಿರುವುದಲ್ಲದೆ

ತಾಲೂಕಿನಲ್ಲಿ ಎಸ್ಎಸ್ಎಲ್ಸಿ ಮತ್ತು ಪಿಯುಸಿಯಲ್ಲಿ ಹೆಚ್ಚ ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರತಿಭಾ ಪುರಸ್ಕಾರದ ಮೂಲಕ ಗೌರವಿಸುವುದು ವಿದ್ಯಾರ್ಥಿಗಳ ಭವಿಷ್ಯಕ್ಕೆ ಪ್ರೇರಣೆ ನೀಡುವಂತ್ತದ್ದಾಗಿದೆ ಎಂದರು.

ಕನ್ನಡದ ಪ್ರಥಮ ಶಿಲಾ ಶಾಶನ ದೊರೆತ ಹಲ್ಮಿಡಿ ಗ್ರಾಮದಲ್ಲಿ ಶಾಸನದ ಪ್ರತಿಕೃತಿ ಮಂಟಪವನ್ನು 28 ಲಕ್ಷ ರೂ. ಸ್ವಂತ ಹಣದಲ್ಲಿ ಅಭಿವೃದ್ಧಿ ಪಡಿಸಿರುವುದು ಅವರ ಸಮಾಜಮುಖಿ ಕೆಲಸಕ್ಕೆ ಸಾಕ್ಷಿಯಾಗಿದೆ. ಇನ್ನೂ ತಾಲೂಕಿನಲ್ಲಿರುವ ಅನೇಕ ದೇವಾಲಯಗಳಿಗೆ ಗ್ರಾನೈಟ್ ಸೇರಿದಂತೆ ವಿವಿಧ ರೀತಿಯ ದಾನ ಧರ್ಮಗಳನ್ನು ಮಾಡಿ ಯಾವುದೇ ಪ್ರಚಾರಕ್ಕೂ ಆಸೆ ಪಡದೆ ಕೆಲಸ ಮಾಡುವ ಮೂಲಕ ದಾನಿಯಾಗಿ ಗುರುತಿಸಿ ಕೊಂಡು ಮುಂದೆ ಸಾಗುತಿದ್ದಾರೆ.

ಗ್ರಾನೈಟ್ ಉದ್ಯಮಿಯಾಗಿರುವ ರಾಜಶೇಖರ್ ಅವರು ತಮ್ಮ ನೇರ ಮಾತಿನ ವ್ಯಕ್ತಿತ್ವ ಹೊಂದಿರುವ ಅವರು ಸಮಾಜದ ಹಿತದೃಷ್ಟಿಯಿಂದ ಕಾರ್ಯನಿರ್ವಹಿಸುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಜನಪರ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಮಾಜ ಸೇವೆಯಲ್ಲಿ ಹೆಚ್ಚಿನ ಸಾಧನೆ ಮಾಡಲಿ ಎಂದು ಹಾರೈಸಿದರು.

ಪುರಸಭಾ ಅಧ್ಯಕ್ಷ ಅಕ್ರಂ ಶರೀಫ್ ಮಾತನಾಡಿ ದೇವಾಲಯಗಳ ಜೀರ್ಣೋದ್ಧಾರ, ಧಾರ್ಮಿಕ ಕಾರ್ಯಕ್ರಮಗಳ ಆಯೋಜನೆ, ಅನ್ನಸಂತರ್ಪಣೆ, ಉತ್ಸವಗಳಿಗೆ ಆರ್ಥಿಕ ಸಹಾಯ ಸೇರಿದಂತೆ ಹಲವು ಸೇವಾ ಕಾರ್ಯಗಳ ಮೂಲಕ ರಾಜಶೇಖರ್ ಅವರು ಧರ್ಮ ಮತ್ತು ಸಮಾಜದ ನಡುವಿನ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ಅಕ್ರಂ ಷರೀಫ್ ಮಾತನಾಡಿದರು. ವೀರಶೈವ ಯುವ ಘಟಕದ ಮಾಜಿ ಅಧ್ಯಕ್ಷ ಚೇತನ್ ಗೆಂಡೇಹಳ್ಳಿ, ವೀರಶೈವ ಲಿಂಗಾಯತ ಮಹಿಳಾ ಘಟಕದ ಅಧ್ಯಕ್ಷೆ ವಿಂಪು ಸಂತೋಷ, ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಮದೇಗೌಡ, ಭಿಮಾನಿ ಬಳಗದ ಧರ್ಮ ಪಾಲ್, ಭರತ್, ಮಸಾಲೆ ಮಂಜು,ರವಿ, ಲಕ್ಷ್ಮೀನಾರಾಯಣ ಇದ್ದರು.

# ಪತ್ನಿ-ಅಪ್ರಾಪ್ತ ಪುತ್ರನಿಂದ ಕೊಲೆ ಆರೋಪ

## ಹೂತಿದ್ದ ಮೃತದೇಹ ಹೊರ ತೆಗೆದು ಮರಣೋತ್ತರ ಪರೀಕ್ಷೆ ನಡೆಸಿದ ಪೊಲೀಸರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವ್ಯಕ್ತಿಯ ಸಾವಿನ ಬಗ್ಗೆ ಅನುಮಾನ ವ್ಯಕ್ತವಾದ ಹಿನ್ನೆಲೆಯಲ್ಲಿ ಹೂತಿದ್ದ ಮೃತದೇಹವನ್ನು ಮತ್ತೆ ಹೊರ ತೆಗೆದು ಅಂತ್ಯ ಸಂಸ್ಕಾರ ಮಾಡಿದ ಘಟನೆ ನಗರದ ಬಿಟ್ಟಗೋಡನಹಳ್ಳಿ ಸ್ಮಶಾನದಲ್ಲಿ ನಡೆದಿದೆ.

ನಗರದ ತಣ್ಣೀರುಹಳ್ಳದಲ್ಲಿ ಕೇರಳಾಪುರ ಮಿಲ್ಟ್ರಿ ಹೋಟೆಲ್ ನಡೆಸುತ್ತಿದ್ದ ಗುರುಮೂರ್ತಿ(44) ಎಂಬಾತ ಕಳೆದ ಮೇ 18 ರಂದು ಸಾವನ್ನಪ್ಪಿದ್ದ. ಆದರೆ ಮಗನ ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದ ತಾಯಿ, ಮೇ 25 ರಂದು ನಗರಠಾಣೆ ಪೊಲೀಸರಿಗೆ ದೂರು ನೀಡಿದ್ದರು. ದೂರು ಆಧರಿಸಿ ಇಂದು ತಹಸೀಲ್ದಾರ್ ಹಾಗೂ ಇತರೆ ಅಧಿಕಾರಿಗಳ ಸಮ್ಮುಖದಲ್ಲಿ ಮೃತದೇಹ ಹೊರ ತೆಗೆದು ಮರಣೋತ್ತರ ಪರೀಕ್ಷೆ ನಡೆಸಿದರು.

ಮೃತ ಗುರುಮೂರ್ತಿ ಸಾಕಷ್ಟು ಸಾಲ ಮಾಡಿಕೊಂಡಿದ್ದ. ಇದೇ ವಿಚಾರಕ್ಕೆ ಪತಿ ಪತ್ನಿ ವೀಣಾ, ನಿತ್ಯ ಜಗಳ ಆಡುತ್ತಿದ್ದಳು. ಅಲ್ಲದೇ ಅಪ್ರಾಪ್ತ ಮಗನೊಂದಿಗೆ ಸೇರಿ ಗಂಡನೊಂದಿಗೆ ಹಲ್ಲೆ ಸಹ ಮಾಡಿದ್ದಳು.

ಸಾಯುವ 4 ದಿನ ಮುಂಚೆ ಅಂದರೆ ಮೇ 14 ರಂದು ಮೈಸೂರಿನಲ್ಲಿರುವ ತಾಯಿ ಮನೆಗೆ ಗುರುಮೂರ್ತಿ ಹೋಗಿದ್ದ. ಆಗ ಹೊಟ್ಟೆಗೆ ನೋವು ನಿವಾರಕ ಬ್ಯಾಂಡೇಜ್ ಹಾಕಿಕೊಂಡಿದ್ದನ್ನು ಗಮನಿಸಿದ ತಾಯಿ ರೇಣುಕಾ, ಮಗನನ್ನು ಪ್ರಶ್ನೆ ಮಾಡಿದರು.

ಆಗ ಹಾಸನದಲ್ಲಿ ಪತ್ನಿ ಹಾಗೂ ಪುತ್ರ ಹಲ್ಲೆ ಮಾಡಿದ್ದಾರೆ ಎಂಬ ಸಂಗತಿ ಬಹಿರಂಗ ಪಡಿಸಿದ್ದ.

ಮೇ 15 ರಂದು ಮೈಸೂರಿನಿಂದ ಹಾಸನಕ್ಕೆ ಬಂದಿದ್ದ ಗುರುಮೂರ್ತಿ, 18 ರಂದು ಮನೆಯಲ್ಲಿಯೇ ಸಾವನ್ನಪ್ಪಿದ್ದ.



ಈ ನಡುವೆ ಮನೆಯಲ್ಲಿದ್ದ ಸಿಸಿಟಿವಿ ಪರಿಶೀಲಿಸಿದ್ದ ಗುರುಮೂರ್ತಿ ಮಾವ, ಸಿಸಿಟಿವಿಯಲ್ಲಿ ಗುರುಮೂರ್ತಿ ಮೇಲೆ ಪತ್ನಿ ವೀಣಾ ಹಾಗೂ ಅಪ್ರಾಪ್ತ ಪುತ್ರ ಹಲ್ಲೆ ನಡೆಸುವ ದೃಶ್ಯ ಸೆರೆಯಾಗಿತ್ತು. ಮೇ 17 ರ ಪತ್ನಿ ಹಾಗೂ ಅಪ್ರಾಪ್ತ ಪುತ್ರ ಗುರುಮೂರ್ತಿ ಮೇಲೆ ಹಲ್ಲೆ ನಡೆಸಿದ್ದರು. ಹಲ್ಲೆಯಿಂದ ಮನೆಯಲ್ಲೇ ಕುಸಿದು ಬಿದ್ದ ಗುರುಮೂರ್ತಿಯನ್ನು ಎಲ್ಲರೂ ಸೇರಿ ಮಂಚದ ಮೇಲೆ ಮಲಗಿಸಿದ್ದರು. ಮಲಗಿದ ಭಂಗಿಯಲ್ಲೇ ಗುರುಮೂರ್ತಿ ಅಸು ನೀಗಿದ್ದ. ಮೇ 18 ರಂದು ಬಿಟ್ಟಗೋಡನಹಳ್ಳಿ ಮಸಣದಲ್ಲಿ ಅಂತ್ಯಕ್ರಿಯೆ ನಡೆದಿತ್ತು.

ವೀಣಾ ಹಾಗೂ ಅಪ್ರಾಪ್ತ ಪುತ್ರ ಹಲ್ಲೆ ನಡೆಸಿ ಕೊಲೆ ಮಗನನ್ನು ಕೊಲೆ ಮಾಡಿದ್ದಾರೆ ಎಂದು ಗಂಭೀರ ಆರೋಪ ಮಾಡಿ ರೇಣುಕಾ ನೀಡಿದ ದೂರಿನ ಮೇರೆಗೆ ಮೃತದೇಹ ಹೊರ ತೆಗೆದು ಮರಣೋತ್ತರ ಪರೀಕ್ಷೆ ನಡೆಸಿದ ನಂತರ ಅಂತ್ಯಕ್ರಿಯೆ ಮಾಡಲಾಯಿತು. ಈ ಸಂಬಂಧ ನಗರ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಶ್ರೀನಿವಾಸ್‌ಗೆ ಸಚಿವ ಸ್ಥಾನ ನೀಡಲು ಆಗ್ರಹ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕರ್ನಾಟಕ ರಾಜ್ಯ ಯಾದವ (ಗೊಲ್ಲ) ಸಮುದಾಯದ ಪ್ರಮುಖ ನಾಯಕ, ವಿಧಾನ ಪರಿಷತ್ ಸದಸ್ಯ ಹಾಗೂ ಕರ್ನಾಟಕ ರಾಜ್ಯ ಯಾದವ ಗೊಲ್ಲ ಸಂಘದ ಅಧ್ಯಕ್ಷ ಡಿ.ಟಿ.ಶ್ರೀನಿವಾಸ್ ಅವರನ್ನು ರಾಜ್ಯ ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳುವಂತೆ ಸಮಾಜದ ಉಪಾಧ್ಯಕ್ಷ ಕೃಷ್ಣಮೂರ್ತಿ ಮತ್ತು ಸಂಚಾಲಕ ನಾಗೇಶ್ ರಾಜ್ಯ ಮತ್ತು ಎಐಸಿಸಿ ಕಾಂಗ್ರೆಸ್ ನಾಯಕರನ್ನು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಹೈಕಮಾಂಡ್‌ಗೆ ಸಲ್ಲಿಸಿರುವ ಮನವಿಯಲ್ಲಿ, ರಾಜ್ಯದಲ್ಲಿ ಯಾದವರು ಸುಮಾರು 19 ಲಕ್ಷಕ್ಕೂ ಅಧಿಕ ಇದ್ದು, ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ದೊರೆಯುತ್ತಿಲ್ಲ. ಹೀಗಾಗಿ ಸಮುದಾಯದ ಪರವಾಗಿ ಹೋರಾಟ ನಡೆಸುತ್ತಿರುವ ಡಿ.ಟಿ. ಶ್ರೀನಿವಾಸ್ ಅವರಿಗೆ ಸಚಿವ ಸ್ಥಾನ ನೀಡಿ ಸಾಮಾಜಿಕ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು. ಸಂಘದ ರಾಜ್ಯಾಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ಡಿ.ಟಿ. ಶ್ರೀನಿವಾಸ್ ಅವರು, ರಾಜ್ಯಾದ್ಯಂತ ಸಮಾಜ ಸಂಘಟಿಸುವ ಕಾರ್ಯದಲ್ಲಿ ತೊಡಗಿಸಿ ಕೊಂಡಿದ್ದಾರೆ. ದಿ.ಎ.ಕೃಷ್ಣಪ್ಪ ಅವರ ನಂತರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ಮೂಲಕ ಆಯ್ಕೆಯಾದ ಮೊದಲ ಅಧ್ಯಕ್ಷರಾಗಿರುವ ಅವರು, ತಮ್ಮ ನೇತೃತ್ವದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಸಮಾಜದ ಸಂಘಟನೆಗೆ ವಿಶೇಷ ಒತ್ತು ನೀಡಿದ್ದಾರೆ. ತುಮಕೂರು, ಚಿತ್ರದುರ್ಗ ಹಾಗೂ ಚಿಕ್ಕೋಡಿ ಸೇರಿದಂತೆ ಹಲವು ಕಡೆ ಬೃಹತ್ ಯಾದವ ಸಮಾವೇಶ ಯಶಸ್ವಿಯಾಗಿ ಆಯೋಜಿಸಿ ಸಮುದಾಯದ ಶಕ್ತಿ ಒಗ್ಗೂಡಿಸಿದ್ದಾರೆ ಎಂದರು. 2024ರ ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿ ಜಯ ಸಾಧಿಸಿರುವ ಡಿ.ಟಿ. ಶ್ರೀನಿವಾಸ್, ಆ ಕ್ಷೇತ್ರದಲ್ಲಿ ಮೊದಲ ಬಾರಿಗೆ ಕಾಂಗ್ರೆಸ್‌ಗೆ ಗೆಲುವು ತಂದುಕೊಟ್ಟ ನಾಯಕ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಶೈಕ್ಷಣಿಕ ಕ್ಷೇತ್ರದಲ್ಲಿಯೂ ವಿಶೇಷ ಸಾಧನೆ ಮಾಡಿರುವ ಡಿ.ಟಿ. ಶ್ರೀನಿವಾಸ್ ಅವರು ಹಲವು ಉನ್ನತ ಪದವಿ ಪಡೆದಿದ್ದಾರೆ. ಶಿಕ್ಷಣ ತಜ್ಞರಾಗಿ ಗುರುತಿಸಿಕೊಂಡಿರುವ ಅವರು ಸಮಾಜದ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಅಲ್ಲದೆ ಕರ್ನಾಟಕ ರಾಜ್ಯ ಪ್ರವರ್ಗ-1ರ ಜಾತಿಗಳ ಒಕ್ಕೂಟದ ಅಧ್ಯಕ್ಷರಾಗಿ ಸುಮಾರು 95ಕ್ಕೂ ಹೆಚ್ಚು ಅತಿ ಹಿಂದುಳಿದ ಸಮುದಾಯಗಳನ್ನು ಸಂಘಟಿಸಿ ಅವರ ಹಕ್ಕುಗಳಿಗಾಗಿ ಹೋರಾಟ ನಡೆಸುತ್ತಿದ್ದಾರೆ ಎಂದರು. ರಾಜ್ಯದ ಹಿಂದುಳಿದ ವರ್ಗಗಳ ಆಶೋತ್ತರಗಳನ್ನು ಸಚಿವ ಸಂಪುಟದಲ್ಲಿ ಸಮರ್ಥವಾಗಿ ಪ್ರತಿನಿಧಿಸುವ ಸಾಮರ್ಥ್ಯ

ಡಿ.ಟಿ. ಶ್ರೀನಿವಾಸ್ ಅವರಿಗಿದೆ. ಆದ್ದರಿಂದ ಅವರಿಗೆ ಸಚಿವ ಸ್ಥಾನ ನೀಡಿ ಯಾದವ ಸಮುದಾಯ ಹಾಗೂ ಪ್ರವರ್ಗ-1ರ ಸಮುದಾಯಗಳಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು. ಶ್ರೀನಿವಾಸ್ ಅವರ ಸಚಿವ ಸಂಪುಟ ಸೇರ್ಪಡೆಯಿಂದ ಹಿಂದುಳಿದ ವರ್ಗಗಳ ಧ್ವನಿ ಸರ್ಕಾರದಲ್ಲಿ ಮತ್ತಷ್ಟು ಬಲವಾಗಿ ಪ್ರತಿಧ್ವನಿಸಲಿದೆ ಎಂದು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಗೋವಿಂದರಾಜು, ಕೃಷ್ಣಪ್ಪ, ಹೊನ್ನೇಗೌಡ, ಕೇಶವೇಗೌಡ ಇದ್ದರು.

# ಗುಣಮಟ್ಟದ ಶಿಕ್ಷಣವೇ ಮಕ್ಕಳ ಪ್ರಗತಿಗೆ ಬುನಾದಿ: ಎಪಿಸಿ ಚಂದ್ರಶೇಖರ್



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಗುಣಮಟ್ಟದ ಶಿಕ್ಷಣದಿಂದ ಮಕ್ಕಳ ಸರ್ವಾಂಗೀಣ ಪ್ರಗತಿ ಸಾಧ್ಯ ಎಂದು ಸಹಾಯಕ ಯೋಜನಾ ಸಮನ್ವಯಾಧಿಕಾರಿ ಚಂದ್ರಶೇಖರ ಹೆಚ್.ಬಿ.ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಹಂಗರಹಳ್ಳಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಶಾಲಾ ಪ್ರಾರಂಭೋತ್ಸವದಲ್ಲಿ ಪಠ್ಯಪುಸ್ತಕ ವಿತರಿಸಿ ಗುಲಾಬಿ ನೀಡುವುದರ ಮೂಲಕ ಮಕ್ಕಳನ್ನು ಶಾಲೆಗೆ ಸ್ವಾಗತಿಸಿದರು.ಪ್ರಾಥಮಿಕ ಶಿಕ್ಷಣ ರಾಷ್ಟ್ರದ ಭದ್ರ ಬುನಾದಿಯಾಗಿದ್ದು,

ಯಾವುದೇ ಮಕ್ಕಳು ಶಾಲೆಯಿಂದ ಹೊರಗುಳಿಯದಂತೆ ಗುಣಾತ್ಮಕ ಶಿಕ್ಷಣ ನೀಡುವುದರ ಮೂಲಕ ಮಕ್ಕಳ ಸರ್ವಾಂಗೀಣ ಪ್ರಗತಿಗೆ ಶ್ರಮಿಸಬೇಕೆಂದು ಹೇಳಿದರು.ಇದೇ ಸಂದರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕಿ ತೇಜಾವತಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಶಿಕ್ಷಣ ಸಂಯೋಜಕ ಕೇಶವ ಅವರು ಮಾತನಾಡಿ, ಮಕ್ಕಳ ಬೆಳವಣಿಗೆಯಲ್ಲಿ ಪೋಷಕರು, ಶಿಕ್ಷಕರು ಹಾಗೂ ಸಮುದಾಯದ ಪಾತ್ರ ಮಹತ್ತರವಾಗಿದ್ದು ಎಲ್ಲರೂ ಕೈಜೋಡಿಸಿದಾಗ ಮಕ್ಕಳ ಉಜ್ವಲ ಭವಿಷ್ಯವನ್ನು ರೂಪಿಸಲು ಸಾಧ್ಯ ಎಂದು ಹೇಳಿದರು.

ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಎಂ.ಜಿ.ಪರಮೇಶ್ ಮಡಬಲು ಮಾತನಾಡಿ, ಇಲಾಖೆಯ ಪ್ರೋತ್ಸಾಹದಾಯಕ ಯೋಜನೆಗಳಾದ ಅಕ್ಷರ ದಾಸೋಹ, ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಶೂ ಸಾಕ್ಸ್ ವಿತರಣೆ, ವಿದ್ಯಾರ್ಥಿ ವೇತನ, ಶುದ್ಧ ಕುಡಿಯುವ, ನೀರು ಶೌಚಾಲಯ ವ್ಯವಸ್ಥೆ, ಶಾಲಾ ಕೈತೋಟ, ಸುಸಜ್ಜಿತ ಕಟ್ಟಡ, ನುರಿತ ಶಿಕ್ಷಕರಿಂದ ಗುಣಮಟ್ಟದ ಬೋಧನೆ ಮತ್ತು ಕಲಿಕೆಯಿಂದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ನಾವೆಲ್ಲರೂ ಮತ್ತಷ್ಟು ಉತ್ಸುಕರಾಗಬೇಕು ಉತ್ತಮ ಕಲಿಕೆಯಿಂದ ಮಕ್ಕಳ ಉಜ್ವಲ ಭವಿಷ್ಯ ಸಾಧ್ಯವಿದೆ. ಆ ಮೂಲಕ ಸುಶಿಕ್ಷಿತ ಸಮಾಜವನ್ನು ನಿರ್ಮಿಸಲು ಸಾಧ್ಯ ಎಂದು ಹೇಳಿದರು.ಶಾಲೆಯ ಹಿರಿಯ ಶಿಕ್ಷಕ ಮೋಹನ್ ಕುಮಾರ್ ಅವರು ವಿದ್ಯಾರ್ಥಿ ಜೀವನದಲ್ಲಿ ಮಕ್ಕಳು ಉತ್ತಮ ಮೌಲ್ಯಗಳನ್ನು ಅಳವಡಿಸಿಕೊಂಡು ಸನ್ಮಾರ್ಗದಲ್ಲಿ ಮುನ್ನಡೆದು,ತಮ್ಮ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು



ಎಂದು ನುಡಿದರು.ಇದೇ ಸಂದರ್ಭದಲ್ಲಿ ಲಕ್ಷ್ಮಣ್, ಅನಂತಕುಮಾರ್, ವಾಸು ಅವರ ಸಹಕಾರವನ್ನು ನೆನೆದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಲಕ್ಷ್ಮಣ್ ಅವರು ಮಾತನಾಡಿ, ಶಾಲೆಯಲ್ಲಿ ಮಕ್ಕಳ ಸಂಖ್ಯೆ ಉತ್ತಮವಾಗಿದ್ದು, ನುರಿತ ಶಿಕ್ಷಕರು ಹಾಗೂ ಗುಣಮಟ್ಟದ ಶಿಕ್ಷಣವನ್ನು ನೀಡಲಾಗುತ್ತಿದ್ದು, ಶಾಲೆಗೆ ಎಲ್ಲಾ ರೀತಿಯ ಅನುಕೂಲತೆಗಳನ್ನು ಕಲ್ಪಿಸಲಾಗಿದೆ. ಪ್ರಸ್ತುತ ಎಲ್. ಕೆ.ಜಿ. ಯು.ಕೆ.ಜಿ. ಯಿಂದ 7ನೇ ತರಗತಿಯವರೆಗೆ ಗುಣಮಟ್ಟದ ಶಿಕ್ಷಣವನ್ನು ನೀಡಲಾಗುತ್ತಿದ್ದು, ಪೋಷಕರು,ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ತಮ್ಮ ಮಕ್ಕಳನ್ನು ಶಾಲೆಗೆ ದಾಖಲಿಸುವಂತೆ ತಿಳಿಸಿದರು.

ಇದೇ ಸಂದರ್ಭದಲ್ಲಿ ಶಾಲೆಯ ಶಿಕ್ಷಕ ವೃಂದದವರು, ಎಸ್.ಡಿ.ಎಂ.ಸಿ.ಪದಾಧಿಕಾರಿಗಳು, ಪೋಷಕರು, ಶಿಕ್ಷಣಾಸಕ್ತರು ಉಪಸ್ಥಿತರಿದ್ದರು. ಶಿಕ್ಷಕಿ ಸುಜಾತ ಸ್ವಾಗತಿಸಿದರು.ಶೈಲ ಪ್ರಾರ್ಥಿಸಿದರು.ಗುರುಪ್ರಶಾಂತ್ ನಿರೂಪಿಸಿದರು.

# ಸಾಮ್ರಾಟ್ ಸುಯೋಧನ ನಾಟಕ ರಂಗಗೀತೆ ಗಾಯನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನದ ಪಿಡಬ್ಲ್ಯೂಡಿ ಕಾಲೋನಿ ಶ್ರೀರಾಮ ಮಂದಿರ ಸಮುದಾಯ ಭವನದಲ್ಲಿ ಹೆಸರಾಂತ ಸಂಗೀತ ನಿರ್ದೇಶಕರಾದ ಶ್ರೀ ಮಹೇಶ್ ಕರಡ್ಯ ಇವರ ನಿರ್ದೇಶನದಲ್ಲಿ ಸಾಮ್ರಾಟ್ ಸುಯೋಧನ ಪೌರಾಣಿಕ ನಾಟಕ ತಾಲೀಮಿನ ಪ್ರಥಮ ಪೂಜೆ ನೆರವೇರಿತು. ಕಲಾವಿದರಾದ ಎಚ್.ಎಮ್.ಪ್ರಭಾಕರ್ ಸಿದ್ದಯ್ಯ ನಗರ ಹಾಸನ, ಸುನಿಲ್ ಆಡುವಳ್ಳಿ, ಶ್ರೀನಿವಾಸ್ ಕರಿಗೌಡನ ಕೊಪ್ಪಲು ಇವರ ಜನ್ಮದಿನವನ್ನು ಕೇಕ್ ಕತ್ತರಿಸಿ ಈ ಕಲಾವಿದರುಗಳಿಗೆ ಸ್ನೇಹ ಬಳಗ ಸನ್ಮಾನಿಸಿ ಗೌರವಿಸಿತು. ಕರ್ನಾಟಕ ರಾಜ್ಯ ಬರಹಗಾರರ ಸಂಘ ನಡೆಸಿದ ರಾಜ್ಯಮಟ್ಟದ ಆನ್ ಲೈನ್ ರಂಗಗೀತೆ ಗಾಯನ ಕಾರ್ಯಕ್ರಮದಲ್ಲಿ ಕಲಾವಿದರು ಭಾಗವಹಿಸಿದರು.

ರಾಜಾದ್ಯಂತ ಭಾಗವಹಿಸಿದ ಕಲಾವಿದರು: ಧರ್ಮ ಜಿ. ಗರೀಘಟ್ಟ, ಪುಟ್ಟಸ್ವಾಮಿಗೌಡ ರಾಮೇನಹಳ್ಳಿ, ಕೆಂಚೇಗೌಡ ಕಾಳೇನಹಳ್ಳಿ ಮಂಡ್ಯ, ರವಿ ಜಿ. ಜಿ. ವಕೀಲರು ಗರೀಘಟ್ಟ ಅರಕಲಗೂಡು ಪ್ರಕಾಶ್ ಟಿ. ಆರ್. ತಟ್ಟೇಕೆರೆ ಹಾಸನ, ನರಸಿಂಹರಾಜು ಸಿ. ಹೆಚ್. ಹುಲುವಂಗಳ ಕೊರಟಿಕೆರೆ, ಚೇತನ್ ಚಂದು ಕೊರಟಿಕೆರೆ, ಹಾರ್ದಿಕ್ ಗೌಡ, ಕಿತ್ತಾನೆ ಹಾಸನ,ಶಿವಕುಮಾರ್ ಮದಲೂರು ಶಿರಾ,ಕಾಮಾಕ್ಷಿ ಬಿ. ಜಿ. ಹೊಳೆನರಸೀಪುರ,ಕಲ್ಲಯ್ಯ ಸೀಗೂರು,ಹೆಚ್. ಎಂ. ಪ್ರಭಾಕರ್ ಸಿದ್ದಯ್ಯನಗರ ಹಾಸನ. ಶಶಿ ಸಾಲಗಾಮೆ,ಧರ್ಮಣ್ಣ ಗವೇನಹಳ್ಳಿ ಗಿರೀಶ್ ಲಕ್ಕಿಹಳ್ಳಿ, ಶ್ರೀನಿವಾಸ್ ಕರೀಗೌಡನಕೊಪ್ಪಲು, ಬಸವರಾಜ್ ಹರದನಹಳ್ಳಿ, ನಾಗಮೋಹನ್ ಹಾಸನ,ಚಂದ್ರಶೇಖರ್ ಸಿಗರನಹಳ್ಳಿ, ರಮೇಶ್ ಗೌಡಪ್ಪ,ಹಾಸನ, ನಂಜಪ್ಪ ಹಾಸನ. ಶೈಲಜಾ ಕೆ. ವಿ. ಜೈಪುರ. ಪಾಲಾಕ್ಷಚಾರ್ ಸೀಗೆನಾಡು, ಕೃಷ್ಣಮೂರ್ತಿ ಹಾಸನ, ಮಮತಾ ಸುಂದರೇಶ್ ಹಾಸನ, ದಿನೇಶ್ ಕೆ. ಆರ್. ಆಲೂರು, ಸೋಮಶೇಖರ್ ಎಲೆಚಾಗಹಳ್ಳಿ, ಸತೀಶ್ ಕಬ್ಬತ್ತಿ.ಕಾಮಾಕ್ಷಿ ಹಾಸನ, ರವಿಕುಮಾರ್ ಬಿದರೆ, ಸುಮಂಗಲಾ ಜೋಯಿಡ, ಉತ್ತರ ಕನ್ನಡ ಮಂಜುಳಾ ಉಮೇಶ್ ಹಾಸನ.ಮಂಜುನಾಥ್ ಹಂಗರಹಳ್ಳಿ. ಬೀರಪ್ಪ ನೆಲ್ಲುಗುಡಿಗೆ. ಹಾಸನದ ಕಾರ್ಯಕ್ರಮದಲ್ಲಿ ಕಲಾವಿದ ಚಂದ್ರು ಸಿಗರನಹಳ್ಳಿ ಮಾತನಾಡಿ ಹಾಸನದಲ್ಲಿ ಶೀಘ್ರದಲ್ಲೇ ರಂಗದ ಮೇಲೆ ಈ ನಾಟಕ ಪ್ರದರ್ಶನಕ್ಕೆ ಸಿದ್ಧತೆ ಮಾಡುತ್ತಿರುವುದಾಗಿ ತಿಳಿಸಿದರು.

# ಆರ್‌ಸಿಬಿ ಯುಗ 2026: ಎರಡನೇ ಐಪಿಎಲ್ ಕಿರೀಟದ ಐತಿಹಾಸಿಕ ವಿಜಯ-ಸಂಭ್ರಮದಲ್ಲಿ ಬೆಂಗಳೂರು!



**ಅಂತೋಣಿ ಮುತ್ತು. ವಿ**
**ಆರ್‌ಸಿಬಿ ಅಭಿಮಾನಿ**
**ಶಿಕ್ಷಕರು, 7259675543**

ಭಾನುವಾರ, 31 ಮೇ 2026 ರಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ಟಾಟಾ ಇಂಡಿಯನ್ ಪ್ರೀಮಿಯರ್ ಲೀಗ್ 2026ರ ಅಂತಿಮ ಹಣಾಹಣಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಗುಜರಾತ್ ಟೈಟನ್ಸ್ ತಂಡವನ್ನು ಮಣಿಸಿ ತನ್ನ ಎರಡನೇ ಐಪಿಎಲ್ ಕಿರೀಟವನ್ನು ಜಯಿಸಿ ಇತಿಹಾಸ ನಿರ್ಮಿಸಿದೆ.ಬ್ಯಾಟಿಂಗ್,ಬೌಲಿಂಗ್ ಹಾಗೂ ಫೀಲ್ಡಿಂಗ್ ಮೂರು ವಿಭಾಗಗಳಲ್ಲಿಯೂ ಅದ್ಭುತ ಪ್ರದರ್ಶನ ನೀಡಿದ ಆರ್‌ಸಿಬಿ ತಂಡವು ಆರಂಭದಿಂದ ಅಂತ್ಯದವರೆಗೆ ಪಂದ್ಯದ ಮೇಲೆ ತನ್ನ ಹಿಡಿತವನ್ನು ಕಾಯ್ದುಕೊಂಡಿತು.ಅಂತಿಮ ಪಂದ್ಯದಲ್ಲಿ ಆರಂಭಿಕ ಆಟಗಾರನಾಗಿ ಕಣಕ್ಕಿಳಿದ ವಿರಾಟ್ ಕೊಹ್ಲಿ ಅವರು 42 ಎಸೆತಗಳಲ್ಲಿ 75 ರನ್‌ಗಳ ಅದ್ಭುತ ಇನ್ನಿಂಗ್ಸ್ ಆಡಿದರು. ಅವರ ಬ್ಯಾಟಿನಿಂದ 9 ಆಕರ್ಷಕ ಬೌಂಡರಿಗಳು ಹಾಗೂ 3 ಭರ್ಜರಿ ಸಿಕ್ಸರ್‌ಗಳು ಹೊರಬಂದವು. ತಂಡಕ್ಕೆ ಅತ್ಯಂತ ಅಗತ್ಯವಾಗಿದ್ದ ಸಂದರ್ಭದಲ್ಲಿ ಜವಾಬ್ದಾರಿಯುತ ಆಟವಾಡಿದ ಅವರು,ಗೆಲುವು ಖಚಿತವಾಗುವವರೆಗೂ ಕ್ರೀಸ್‌ನಲ್ಲೇ ಉಳಿದು ತಂಡವನ್ನು ವಿಜಯದ ದಡ ಸೇರಿಸಿದರು.ವಿಶೇಷವಾಗಿ, ತಮ್ಮ 19 ವರ್ಷಗಳ ಐಪಿಎಲ್ ವೃತ್ತಿಜೀವನದಲ್ಲಿ ಅತಿ ವೇಗದ ಅರ್ಧಶತಕ ದಾಖಲಿಸುವ ಮೂಲಕ ಮತ್ತೊಂದು ಐತಿಹಾಸಿಕ ಸಾಧನೆ ಮಾಡಿದರು.ಮತ್ತೊಬ್ಬ ಪ್ರಮುಖ ಬ್ಯಾಟರ್ ವೆಂಕಟೇಶ್ ಅಯ್ಯರ್ ಅವರು ಕೇವಲ 16 ಎಸೆತಗಳಲ್ಲಿ 32 ರನ್‌ಗಳ ಸಿಡಿಲಬ್ಬರದ ಇನ್ನಿಂಗ್ಸ್ ಆಡಿದರು.ಅವರ ಆಟದಲ್ಲಿ 4 ಬೌಂಡರಿಗಳು ಹಾಗೂ 2 ಸಿಕ್ಸರ್‌ಗಳು ಸೇರಿದ್ದು,ತಂಡಕ್ಕೆ ವೇಗದ ಆರಂಭ ದೊರಕುವಂತೆ ಮಾಡಿತು.ನಾಯಕ ರಜತ್ ಪಾಟೀದಾರ್ ಅವರು 13 ಎಸೆತಗಳಲ್ಲಿ 15 ರನ್‌ಗಳ ಉಪಯುಕ್ತ ಕೊಡುಗೆ ನೀಡಿ ತಂಡದ ಇನ್ನಿಂಗ್ಸ್‌ಗೆ ಬಲ ತುಂಬಿದರು.ಅನುಭವ,ಆತ್ಮವಿಶ್ವಾಸ, ಆಕ್ರಮಣಕಾರಿ ಆಟ ಹಾಗೂ ಕ್ರೀಡಾಸ್ಫೂರ್ತಿಯ ಪ್ರತೀಕವಾಗಿರುವ ವಿರಾಟ್ ಕೊಹ್ಲಿ ಮತ್ತೊಮ್ಮೆ ತಂಡಕ್ಕೆ




ಪ್ರೇರಣೆಯಾದರು. ವಿಶೇಷವಾಗಿ,2022ರಿಂದ 2026ರವರೆಗೆ ಸತತ ನಾಲ್ಕು ಐಪಿಎಲ್ ಋತುಗಳಲ್ಲಿ 600ಕ್ಕೂ ಹೆಚ್ಚು ರನ್‌ಗಳನ್ನು ಗಳಿಸುವ ಮೂಲಕ ಅವರು ಅಪರೂಪದ ದಾಖಲೆಯನ್ನು ನಿರ್ಮಿಸಿದ್ದಾರೆ.ತಮ್ಮ ಸಂಪೂರ್ಣ ಐಪಿಎಲ್ ವೃತ್ತಿಜೀವನದಲ್ಲಿ ಒಟ್ಟು ಆರು ಬಾರಿ 600ಕ್ಕೂ ಹೆಚ್ಚು ರನ್‌ಗಳನ್ನು ಗಳಿಸಿರುವ ಏಕೈಕ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.37ನೇ ವಯಸ್ಸಿನಲ್ಲಿಯೂ ತಮ್ಮ ಅದ್ಭುತ ದೈಹಿಕ ಸಾಮರ್ಥ್ಯ, ಸ್ಥಿರ ಪ್ರದರ್ಶನ ಹಾಗೂ ನಾಯಕತ್ವದ ಗುಣಗಳಿಂದ ಐಪಿಎಲ್ ಲೋಕವನ್ನು ಆಳುತ್ತಿರುವ ಕೊಹ್ಲಿ ಯುವ ಆಟಗಾರರಿಗೆ ಮಾದರಿಯಾಗಿದ್ದಾರೆ.

ನಾಯಕ ರಜತ್ ಪಾಟೀದಾರ್ ಅವರ ಸಮರ್ಥ ನಾಯಕತ್ವ ಈ ವಿಜಯದ ಪ್ರಮುಖ ಕಾರಣಗಳಲ್ಲಿ ಒಂದಾಯಿತು. ಪಂದ್ಯದುದ್ದಕ್ಕೂ ಅವರು ತೆಗೆದುಕೊಂಡ ಸೂಕ್ತ ನಿರ್ಧಾರಗಳು ಹಾಗೂ ತಂಡದ ಮೇಲಿನ ವಿಶ್ವಾಸವು ಆರ್‌ಸಿಬಿಯ ಯಶಸ್ಸಿಗೆ ಬಲವಾಯಿತು.ತಂಡದ ಪ್ರತಿಯೊಬ್ಬ ಆಟಗಾರನ ಅಮೂಲ್ಯ ಕೊಡುಗೆ ಈ ಮಹಾ ಸಾಧನೆಯ ಹಿಂದೆ ಅಡಗಿದೆ.ಮತ್ತೊಂದೆಡೆ,ಶುಭಮನ್ ಗಿಲ್ ನೇತೃತ್ವದ ಗುಜರಾತ್ ಟೈಟನ್ಸ್ ತಂಡವು ಶ್ರೇಷ್ಠ ಹೋರಾಟ ಪ್ರದರ್ಶಿಸಿದರೂ ನಿರ್ಣಾಯಕ ಕ್ಷಣಗಳಲ್ಲಿ ನಿರೀಕ್ಷಿತ ಪ್ರದರ್ಶನ ನೀಡಲು ವಿಫಲವಾಗಿ ಅಂತಿಮ ಪಂದ್ಯದಲ್ಲಿ ನಿರಾಸೆ ಅನುಭವಿಸಿತು.ಆದಾಗ್ಯೂ, ಅವರ ಹೋರಾಟದ ಮನೋಭಾವ ಮತ್ತು ಕ್ರೀಡಾಸ್ಫೂರ್ತಿ ಪ್ರಶಂಸನೀಯವಾಗಿದೆ.ಲಕ್ಷಾಂತರ ಅಭಿಮಾನಿಗಳ ಅಪಾರ ಬೆಂಬಲದೊಂದಿಗೆ ಆರ್‌ಸಿಬಿ ತಂಡವು ವರ್ಷಗಳ ಕನಸನ್ನು ನನಸಾಗಿಸಿದ್ದು, ಇಂದು ಇಡೀ ಬೆಂಗಳೂರು ವಿಜಯೋತ್ಸವದ ಸಂಭ್ರಮದಲ್ಲಿ ತೇಲುತ್ತಿದೆ. ನಗರದಾದ್ಯಂತ ಹರ್ಷೋದ್ಗಾರ, ಪಟಾಕಿ ಸಿಡಿತ, ವಿಜಯ ಮೆರವಣಿಗೆಗಳು ಹಾಗೂ ಶುಭಾಶಯಗಳ ಮಹಾಪೂರವೇ ಹರಿದುಬರುತ್ತಿದೆ. ಅಭಿಮಾನಿಗಳ ಸಂತೋಷಕ್ಕೆ ಪಾರವೇ ಇಲ್ಲದಂತಾಗಿದೆ.

''ಈ ಸಲ ಮಾತ್ರವಲ್ಲ,ಇದು ಆರ್‌ಸಿಬಿಯ ಯುಗ''ಎಂಬ ಘೋಷಣೆ ಮತ್ತೊಮ್ಮೆ ಸಾರ್ಥಕವಾಗಿದೆ.ಈ ವಿಜಯವು ಕೇವಲ ಒಂದು ಕ್ರೀಡಾ ಸಾಧನೆಯಲ್ಲ;ಇದು ಕೋಟ್ಯಂತರ ಅಭಿಮಾನಿಗಳ ಪ್ರೀತಿ,ನಂಬಿಕೆ,ತಾಳ್ಮೆ ಹಾಗೂ ವರ್ಷಗಳ ಕನಸುಗಳ ಮಹಾ ವಿಜಯವಾಗಿದೆ.ಈ ಐತಿಹಾಸಿಕ ಗೆಲುವು ಭಾರತೀಯ ಕ್ರಿಕೆಟ್ ಇತಿಹಾಸದಲ್ಲಿ ಚಿರಸ್ಥಾಯಿಯಾಗಿ ಉಳಿಯಲಿದೆ.ಆರ್‌ಸಿಬಿ ಅಭಿಮಾನಿಗಳಾಗಿ ನಮ್ಮ ತಂಡದ ಈ ಅದ್ಭುತ ಸಾಧನೆಗೆ ನಾವು ಹೆಮ್ಮೆಯಿಂದ ಅಭಿನಂದನೆಗಳನ್ನು ಸಲ್ಲಿಸುತ್ತೇವೆ ಹಾಗೂ ಮುಂದಿನ ದಿನಗಳಲ್ಲಿಯೂ ಇನ್ನಷ್ಟು ಯಶಸ್ಸುಗಳನ್ನು ಸಾಧಿಸಲಿ ಎಂದು ಹಾರೈಸುತ್ತೇವೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248